# All India Radio: Bangalore
# Regional Bulletin In Kannada
# 21.04.2026 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 21.04.2026 / 6.40 p.m.

****************

**ಮುಖ್ಯಾಂಶಗಳು**

1. **ಚಾಮರಾಜನಗರ ಆಕ್ಸಿಜನ್ ದುರಂತ ಸಂತ್ರಸ್ತರಿಗೆ ಖಾಯಂ ಉದ್ಯೋಗ ನೇಮಕಾತಿ ಪತ್ರ ವಿತರಿಸಿದ ಸರ್ಕಾರ**
2. **ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ನಾಳೆ ರಾಜ್ಯ ಪ್ರವಾಸ; ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ 10ನೇ ಘಟಿಕೋತ್ಸವದಲ್ಲಿ ಭಾಗಿ**
3. **ಹಿಂದಿ ಸೇರಿದಂತೆ ಎಸ್‌ಎಸ್‌ಎಲ್‌ಸಿ ತೃತೀಯ ಭಾಷೆಗೆ ಅಂಕ ನೀಡಲು ಹೈಕೋರ್ಟ್ ಆದೇಶ**
4. **ವಿರೋಧ ಪಕ್ಷದ ಶಾಸಕರನ್ನು ವಿಶ್ವಾಸಕ್ಕೆ ಪಡೆದು ಜಿಬಿಎ ವಾರ್ಡ್‌ಗಳ ಮರುವಿಂಗಡಣೆ – ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ**
5. **ರಾಜ್ಯದ ಜವಳಿ ಉದ್ಯಮದ ಬೆಳವಣಿಗೆಗೆ ಕೇಂದ್ರ ಬಜೆಟ್‌ನಲ್ಲಿನ ಏಳು ಘೋಷಣೆಗಳು ಸಹಕಾರಿ– ಜವಳಿ ಸಚಿವಾಲಯದ ಕಾರ್ಯದರ್ಶಿ ನೀಲಂ ಶಮಿರಾವ್ ಸ್ಪಷ್ಟನೆ**

****************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ನಾಳೆ ಒಂದು ದಿನದ ರಾಜ್ಯ ಪ್ರವಾಸ ಕೈಗೊಳ್ಳಲಿದ್ದು, ಬೀದರ್‌ನ ಚೆನ್ನಬಸವ ದೇವರ ಸಮಾಧಿ ಬಳಿ ನಡೆಯಲಿರುವ ಡಾ.ಬಸವಲಿಂಗ ಸ್ವಾಮೀಜಿ ಅವರ 75ನೇ ವರ್ಷದ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಬಳಿಕ ಕಲಬುರಗಿಗೆ ತೆರಳಲಿರುವ ಅವರು, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಹತ್ತನೇ ಘಟಿಕೋತ್ಸವದಲ್ಲಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

****************

ಹಿಂದಿ ಸೇರಿದಂತೆ ಎಸ್‌ಎಸ್‌ಎಲ್‌ಸಿ ತೃತೀಯ ಭಾಷೆಗೆ ಈ ವರ್ಷ ಅಂಕವನ್ನೇ ನೀಡುವಂತೆ ಸರ್ಕಾರಕ್ಕೆ ಉಚ್ಚ ನ್ಯಾಯಾಲಯ ಆದೇಶ ನೀಡಿದೆ.

ತೃತೀಯ ಭಾಷೆಗೆ ಅಂಕದ ಬದಲು ಗ್ರೇಡ್ ನೀಡುವ ಸಂಬಂಧ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಇ.ಎಸ್.ಇಂದಿರೇಶ್ ಅವರಿದ್ದ ಪೀಠ, ಈ ವರ್ಷ ಹಳೆಯ ಪದ್ಧತಿಯನ್ನೇ ಮುಂದುವರಿಸುವಂತೆ ಸೂಚನೆ ನೀಡಿದೆ.

ನ್ಯಾಯಾಲಯದ ಈ ಆದೇಶದಿಂದ ಸರ್ಕಾರದ ಆದೇಶಕ್ಕೆ ಹಿನ್ನಡೆಯಾಗಿದ್ದು, ವಿಭಾಗೀಯ ಪೀಠದಲ್ಲಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಜಾಗೊಂಡಿದೆ.

ನ್ಯಾಯಾಲಯದ ಈ ಆದೇಶದಿಂದ ಎಸ್ಎಸ್ಎಲ್ಸಿ ಪರೀಕ್ಷೆಯ ಎಲ್ಲಾ ತೃತೀಯ ಭಾಷೆಗೂ ಅಂಕಗಳು ಅನ್ವಯವಾಗಲಿದೆ.

****************

ಪ್ರಜಾಪ್ರಭುತ್ವ ವ್ಯವಸ್ಥೆಗೆ ಅನುಗುಣವಾಗಿ ವಿರೋಧ ಪಕ್ಷದ ಶಾಸಕರು, ಸಾರ್ವಜನಿಕರನ್ನು ವಿಶ್ವಾಸಕ್ಕೆ ಪಡೆದು ಜಿಬಿಎ ಪಾಲಿಕೆಗಳು ಹಾಗೂ ವಾರ್ಡ್‌ಗಳ ಮರುವಿಂಗಡಣೆ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೆಡಿಎಸ್ ಹಾಗೂ ಬಿಜೆಪಿ ಶಾಸಕರ ಜತೆ ಚರ್ಚೆ ಮಾಡಿ, ಅವರೆಲ್ಲರ ಅಭಿಪ್ರಾಯ ಪಡೆದ ಬಳಿಕವೇ ಅಂತಿಮ ತೀರ್ಮಾನ ಮಾಡಲಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ, ಜಿಬಿಎ ಪಾಲಿಕೆಗಳ ಚುನಾವಣೆಗೆ ಸಿದ್ಧವಿರುವುದಾಗಿ ತಿಳಿಸಿದ ಅವರು, ಪ್ರಕ್ರಿಯೆ ನಡೆಸಲು ರಾಜ್ಯ ಚುನಾವಣಾ ಆಯೋಗ ಹಾಗೂ ನ್ಯಾಯಾಲಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ರೈತರ ಅಭಿವೃದ್ಧಿಗಾಗಿ ಮಂಡ್ಯ ಜಿಲ್ಲೆಗೆ ಕೃಷಿ ವಿಶ್ವವಿದ್ಯಾನಿಲಯ ತರಲಾಗಿದ್ದು, ಜಿಲ್ಲೆಯ ರೈತರು ಕೃಷಿ ವಿಶ್ವವಿದ್ಯಾನಿಲಯದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿದ್ದ ಹೈಟೆಕ್ ಹಾರ್ವೆಸ್ಟ್ ಹಬ್ ಮತ್ತು ಸೆಕೆಂಡರಿ ಕೃಷಿ ಯೋಜನೆಗಳ ರೈತ ಫಲಾನುಭವಿಗಳಿಗೆ ಯಂತ್ರೋಪಕರಣಗಳ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಕಳೆದ ಮೂರು ವರ್ಷಗಳಿಂದ 2 ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ಮೌಲ್ಯದ ಕೃಷಿ ಯಂತ್ರೋಪಕರಣಗಳನ್ನು ರಾಜ್ಯದ ರೈತರಿಗೆ ನೀಡಲಾಗಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ 400 ಕ್ಕೂ ಹೆಚ್ಚು ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳನ್ನು ರೈತರಿಗೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ವಿವಿಧ ಬೆಳೆಗಳ ಕಟಾವಿಗೆ ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳು ಉಪಯುಕ್ತವಾಗಿದೆ. ಈ ಯಂತ್ರೋಪಕರಣಗಳನ್ನು ಬಳಸಿ ಕಡಿಮೆ ವೆಚ್ಚದಲ್ಲಿ ಹೆಚ್ಚು ಪರಿಣಾಮಕಾರಿಯಾಗಿ ಬೆಳೆಗಳನ್ನು ಕಟಾವು ಮಾಡಬಹುದಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ, ಅರ್ಹ ಫಲಾನುಭವಿಗಳಿಗೆ 13 ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹಸ್ತಾಂತರಿಸಿದರು.

****************

ಜವಳಿ ವಲಯಕ್ಕೆ ಸಂಬಂಧಿಸಿದಂತೆ ಕೇಂದ್ರ ಬಜೆಟ್‌ನಲ್ಲಿ ಮಾಡಿರುವ ಏಳು ಘೋಷಣೆಗಳು ರಾಜ್ಯದ ಜವಳಿ ಉದ್ಯಮದ ಬೆಳವಣಿಗೆಗೆ ಹಾಗೂ ರಫ್ತು ಹೆಚ್ಚಿಸಲು ಸಹಾಯ ಮಾಡಲಿದೆ ಎಂದು ಜವಳಿ ಸಚಿವಾಲಯದ ಕಾರ್ಯದರ್ಶಿ ನೀಲಂ ಶಮಿರಾವ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಇಂದು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಜವಳಿ ವಲಯವು ಎರಡನೇ ಅತಿ ಹೆಚ್ಚು ಉದ್ಯೋಗವನ್ನು ಸೃಷ್ಟಿಸುತ್ತದೆ ಎಂದು ಹೇಳಿದ್ದಾರೆ.

2030ರ ವೇಳೆಗೆ ಕೇಂದ್ರ ಸರ್ಕಾರವು ಜವಳಿ ಉದ್ಯಮದ ಪಾತ್ರವನ್ನು ದ್ವಿಗುಣಗೊಳಿಸಲು ಮತ್ತು ಪ್ರಸ್ತುತಮಟ್ಟಕ್ಕಿಂತ ಸುಮಾರು ಮೂರು ಪಟ್ಟು ರಫ್ತುಗಳನ್ನು ಹೆಚ್ಚಿಸಲು ಸಜ್ಜಾಗಿದೆ ಎಂದು ತಿಳಿಸಿದ್ದಾರೆ.

****************

ಕೇಂದ್ರ ಸರ್ಕಾರ ಪದ್ಮ ಪ್ರಶಸ್ತಿ ಘೋಷಿಸಿದಾಗ ಆಶ್ಚರ್ಯವಾಗಿತ್ತು ಎಂದು ನಿವೃತ್ತ ವಿಜ್ಞಾನಿ ಡಾ.ಶುಭಾ ವೆಂಕಟೇಶ ಅಯ್ಯಂಗಾರ್ ತಿಳಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ನಮ್ಮ ಅಳಿಲು ಸೇವೆ ಗುರುತಿಸಿ, ಕೇಂದ್ರ ಸರ್ಕಾರ ಈ ಪ್ರಶಸ್ತಿ ನೀಡಿರುವುದಕ್ಕೆ ಧನ್ಯವಾದ ಸಲ್ಲಿಸಿದ್ದಾರೆ.

ನಿವೃತ್ತಿಯಾಗಿ ಐದು ವರ್ಷಗಳ ಬಳಿಕ ಈ ಪ್ರಶಸ್ತಿ ಸಂದಿರುವುದು ಖುಷಿಯ ವಿಚಾರ ಎಂದು ಹೇಳಿದ್ದಾರೆ.

****************

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಿಂದ ಕಾನೂನು ಮತ್ತು ಸುವ್ಯವಸ್ಥೆ ಅತ್ಯಂತ ಉತ್ತಮವಾಗಿದ್ದು, ಇದೇ ರೀತಿಯ ಶಾಂತಿ ವಾತಾವರಣ ಕಾಪಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ. ಸಲೀಂ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ನಡೆದ ಪಶ್ಚಿಮ ವಲಯ ಪೊಲೀಸ್ ಇಲಾಖೆ ಅಧಿಕಾರಿಗಳ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರ್ವಜನಿಕರೊಂದಿಗೆ ಉತ್ತಮ ಬಾಂಧವ್ಯ ಇರಿಸಿಕೊಳ್ಳುವಂತೆ ಪೊಲೀಸರಿಗೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದ್ದಾರೆ.

ಹಂತ ಹಂತವಾಗಿ ಪೊಲೀಸರ ವರ್ಗಾವಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

****************

ಇದೇ 23 ಮತ್ತು 24 ರಂದು ಉಡುಪಿ ಜಿಲ್ಲೆಯಲ್ಲಿ ನಡೆಯಲಿರುವ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ವಿದ್ಯಾರ್ಥಿ ಸ್ನೇಹಿಯಾಗಿ ಹಾಗೂ ಸುವ್ಯವಸ್ಥಿತವಾಗಿ ನಡೆಸಲು ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ತಿಳಿಸಿದ್ದಾರೆ.

2026ನೇ ಸಾಲಿನ ಸಿಇಟಿ ಪರೀಕ್ಷೆ ಹಾಗೂ ದ್ವಿತೀಯ ಪಿ.ಯು.ಸಿ ಪರೀಕ್ಷೆ –2 ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸಕ್ತ ಸಾಲಿನ ಸಿಇಟಿ ಪರೀಕ್ಷೆಗಳು ಜಿಲ್ಲೆಯ ಉಡುಪಿ, ಕುಂದಾಪುರ ಹಾಗೂ ಕಾರ್ಕಳ ತಾಲೂಕಿನ 23 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, 8746 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

****************

1. **ಕೋಲಾರ** ಜಿಲ್ಲೆಯಲ್ಲಿ ಜನಗಣತಿ ಪ್ರಕ್ರಿಯೆಯು ಅತ್ಯಂತ ಸಮರ್ಪಕವಾಗಿ ನಡೆಯಬೇಕು. ಯಾವುದೇ ರೀತಿಯ ನಿರ್ಲಕ್ಷ್ಯ ಅಥವಾ ವಿಳಂಬವನ್ನು ಸಹಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.
2. ಸಮುದಾಯ ಭವನಗಳು ಗ್ರಾಮೀಣ ಭಾಗದ ಬಡ ಜನರಿಗೆ ಶುಭ ಕಾರ್ಯ ನಡೆಸಲು ನೇರವಾಗಲಿದೆ ಎಂದು ಮುಖ್ಯಮಂತ್ರಿ ಆರ್ಥಿಕ ಸಲಹೆಗಾರರು ಯಲಬುರ್ಗಾ ಶಾಸಕ ಬಸವರಾಜ ರಾಯರಡ್ಡಿ **ಕೊಪ್ಪಳದಲ್ಲಿ** ತಿಳಿಸಿದ್ದಾರೆ.

3. **ಬೆಂಗಳೂರು ಉತ್ತರ ನಗರ** ಪಾಲಿಕೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್, ಇಂದು ಯಲಹಂಕ ಪ್ರದೇಶದಲ್ಲಿ ಉಂಟಾಗುತ್ತಿರುವ ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿದರು.

***************